Akashvani : Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

14.09.2026 / 18.40 hrs

---

ಮುಖ್ಯಾಂಶಗಳು

- ರಾಜ್ಯದ ೨೦೦ಕ್ಕೂ ಹೆಚ್ಚು ತಾಲೂಕುಗಳಲ್ಲಿ ಬರ ಪರಿಸ್ಥಿತಿ, ಕೇಂದ್ರದ ನಿಯಮಾನುಸಾರ ಘೋಷಣೆ- ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ರಾಜ್ಯದಲ್ಲಿ ವಿದ್ಯುತ್ ಬಳಕೆಯಲ್ಲಿ ಹೆಚ್ಚಳ; ವಿದ್ಯುತ್ ಖರೀದಿಗೆ ನೆರೆಯ ರಾಜ್ಯಗಳೊಂದಿಗೆ ಮಾತುಕತೆ
- ಆಲಮಟ್ಟಿ ಕೃಷ್ಣಾ ಜಲಾಶಯದಿಂದ ವಾರಾಬಂದಿ ಪದ್ಧತಿ ಮೂಲಕ ಕಾಲುವೆ ಜಾಲಕ್ಕೆ ನೀರು ಬಿಡುಗಡೆ ಆರಂಭ
- ಗೌರಿ ಗಣೇಶ ಮೂರ್ತಿ ವಿಸರ್ಜನೆಗೆ ನಿಗದಿತ ವ್ಯವಸ್ಥೆ ಬಳಸುವಂತೆ ಸರ್ಕಾರದ ಮನವಿ
- ನಾಳೆ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ; ವಿವಿಧೆಡೆ ಕಾರ್ಯಕ್ರಮ ಆಯೋಜನೆ

---

ರಾಜ್ಯದಲ್ಲಿ ೨೦೦ಕ್ಕೂ ಹೆಚ್ಚು ತಾಲೂಕುಗಳು ಬರ ಪರಿಸ್ಥಿತಿಗೆ ಸಿಲುಕಿದ್ದು, ಕೇಂದ್ರದ ನಿಯಮಾನುಸಾರ ಬರ ಪೀಡಿತ ತಾಲೂಕುಗಳನ್ನು ಘೋಷಣೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಕನಕಪುರದಲ್ಲಿಂದು ಸುದ್ದಿಗಾರರರೊಂದಿಗೆ ಮಾತನಾಡಿದ ಅವರು, ಈಗಾಗಲೇ ೧೦೨ ತಾಲೂಕುಗಳನ್ನು ಬರಪೀಡಿತ ಎಂದು ಘೋಷಣೆ ಮಾಡಲಾಗಿದ್ದು, ಉಳಿದ ಪ್ರದೇಶಗಳಲ್ಲಿ ಪರಿಶೀಲನೆ ನಡೆಯುತ್ತಿದೆ. ಯಾರೂ ಆತುರ ಪಡುವುದು ಬೇಡ ಎಂದು ಹೇಳಿದರು. ಹಲವು

ಪ್ರದೇಶಗಳಲ್ಲಿ ಬೆಳೆ ನಾಶವಾಗಿದ್ದು, ಅಂತರ್ಜಲ ಕುಸಿದಿದೆ. ಅನೇಕ ಕಡೆ ಬೆಳೆ ಹಾಕಲಾಗಿಲ್ಲ. ಮುಂದಿನ ದಿನಗಳಲ್ಲಿ ಕುಡಿಯುವ ನೀರು ಹಾಗೂ ವಿದ್ಯುತ್ ಅಭಾವ ಹೆಚ್ಚಾಗುವ ಸಾಧ್ಯತೆಗಳಿವೆ ಎಂದು ತಿಳಿಸಿದರು.

ಕಳೆದ ವಾರ ೧೯ ಸಾವಿರಕ್ಕೂ ಹೆಚ್ಚು ಮೆಗಾ ವ್ಯಾಟ್ ವಿದ್ಯುತ್‌ಗೆ ಬೇಡಿಕೆ ಉಂಟಾಗಿತ್ತು. ೧೧ ರಿಂದ ೧೨ ರೂಪಾಯಿಗೆ ವಿದ್ಯುತ್ ಖರೀದಿ ಮಾಡಬೇಕಾದ ಅನಿವಾರ್ಯತೆ ಎದುರಾಗಿದೆ. ರಾತ್ರಿ ವೇಳೆ ವಿದ್ಯುತ್ ಬಳಕೆ ಹೆಚ್ಚಾಗಿದೆ. ನೆರೆಯ ರಾಜ್ಯಗಳ ಜೊತೆ ಚರ್ಚೆ ಮಾಡಲು ಸಚಿವರಿಗೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಮಾಹಿತಿ ನೀಡಿದರು.

ಕಲ್ಲಿದ್ದಲು ನಿಕ್ಷೇಪ ಇರುವ ಕಡೆಗಳಲ್ಲೇ ತುರ್ತಾಗಿ ಶಾಖೋತ್ಪನ್ನ ಇಂಧನ ತಯಾರಿಕ ಘಟಕ ಸ್ಥಾಪಿಸಬೇಕು. 'ಒನ್ ನೇಷನ್ ಒನ್ ಗ್ರಿಡ್' ಮಾಡಲಾಗಿದ್ದು, ಎಲ್ಲೆ ವಿದ್ಯುತ್ ಉತ್ಪಾದನೆಯಾದರೂ ರಾಜ್ಯಕ್ಕೆ ತರಬಹುದು. ಇದಕ್ಕೆ ಸರಬರಾಜು ವೆಚ್ಚ ಬೀಳಲಿದೆ.

ಈ ವಿಚಾರವಾಗಿ ಇಂಧನ ಸಚಿವರು ಹಾಗೂ ಇಲಾಖೆ ಅಧಿಕಾರಿಗಳ ಜೊತೆ ಸಭೆ ನಡೆಸಿ ಮಾತನಾಡಿರುವುದಾಗಿ ಮುಖ್ಯಮಂತ್ರಿ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಇದೇ ೧೮ರಂದು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಚಿವ ಸಂಪುಟ ಸಭೆ ನಡೆಯಲಿದ್ದು, ಆ ಭಾಗದ ಜನ ಉದ್ಯೋಗಕ್ಕಾಗಿ ಹೊರಗೆ ಹೋಗುತ್ತಿರುವುದನ್ನು ತಪ್ಪಿಸಿ, ಅಲ್ಲಿನ ಪ್ರಾಕೃತಿಕ ಸಂಪತ್ತು ಬಳಸಿಕೊಂಡು ಅವರ ಬದುಕಿನಲ್ಲಿ ಬದಲಾವಣೆ ತರಲು ಅನೇಕ ಹೊಸ ಚಿಂತನೆಗಳನ್ನು ಘೋಷಣೆ ಮಾಡಲಾಗುವುದು ಎಂದು ಹೇಳಿದರು.

---

ಆಲಮಟ್ಟಿ ಕೃಷ್ಣಾ ಜಲಾಶಯದಿಂದ ಇಂದಿನಿಂದ ವಾರಾಬಂದಿ ಪದ್ಧತಿ ಮೂಲಕ ಕಾಲುವೆ ಜಾಲಕ್ಕೆ ನೀರು ಬಿಡುಗಡೆ ಆರಂಭಿಸಲಾಗಿದೆ.

ಇಂದು ಕಾಲುವೆಗೆ ನೀರು ಹರಿಸಲಾಗಿದ್ದು, ಇದೇ ೨೭ರವರೆಗೆ ಮುಂದುವರಿಯಲಿದೆ.

ಆಲಮಟ್ಟಿ ಕೃಷ್ಣಾ ಜಲಾಶಯಕ್ಕೆ ಒಳಹರಿವು ಕ್ಷೀಣಿಸುತ್ತಿರುವ ಹಿನ್ನೆಲೆಯಲ್ಲಿ, ೨೦೨೪-೨೫ನೇ ಸಾಲಿನ ಮುಂಗಾರು ಹಂಗಾಮಿನ ಬಾಕಿ ಅವಧಿಗೆ ಕಾಲುವೆ ಜಾಲಕ್ಕೆ ನೀರು ಹರಿಸಲು ೧೪ ದಿನ ಚಾಲೂ ಹಾಗೂ ೧೦ ದಿನ ಬಂದ್ ಆಧಾರದ ಮೇಲೆ ವಾರಾಬಂದಿ ಪದ್ಧತಿ ಜಾರಿಗೊಳಿಸಲಾಗಿದೆ.

ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತದ ಅಧಿಕಾರಿಗಳು ಈ ಹೊಸ ವೇಳಾಪಟ್ಟಿಯನ್ನು ಪ್ರಕಟಿಸಿದ್ದಾರೆ. ಆಲಮಟ್ಟಿ ಎಡದಂಡೆ, ಬಲದಂಡೆ, ಚಿಮ್ಮಲಗಿ ಪಶ್ಚಿಮ ಕಾಲುವೆ ಹಾಗೂ ತಿಮ್ಮಾಪೂರ ಮತ್ತು ಮರೋಳ ಏತ ನೀರಾವರಿ ಕಾಲುವೆಗಳಿಗೆ ನಿಯಮ ಅನ್ವಯಿಸುವಂತೆ ನಿನ್ನೆ ಮಧ್ಯರಾತ್ರಿಯಿಂದ ನೀರನ್ನು ಹರಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜಲಾಶಯದ ನೀರಿನ ಅಭಾವ ಮತ್ತು ಪೋಲಾಗುವುದನ್ನು ತಡೆಯುವ ನಿಟ್ಟಿನಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಆ ಕಾರಣದಿಂದ ಅಚ್ಚುಕಟ್ಟು ವ್ಯಾಪ್ತಿಯ ರೈತ ಬಾಂಧವರು ನೀರನ್ನು ಅತ್ಯಂತ ಮಿತವ್ಯಯವಾಗಿ ಬಳಸಿ, ಇಲಾಖೆಯೊಂದಿಗೆ ಸಹಕರಿಸಬೇಕೆಂದು ಕೃಷ್ಣಾ ಭಾಗ್ಯ ಜಲ ನಿಗಮ ನೀರಾವರಿ ಸಲಹಾ ಸಮಿತಿ ಅಧಿಕಾರಿಗಳು ಮನವಿ ಮಾಡಿದ್ದಾರೆ.

---

ನಾಳೆ, ವಿಶ್ವವಿಖ್ಯಾತ ಎಂಜಿನಿಯರ್, ಭಾರತರತ್ನ ಸರ್.ಎಂ.ವಿಶ್ವೇಶ್ವರಯ್ಯ ಅವರ ಜನ್ಮದಿನ. ಅವರ ಜನ್ಮದಿನವನ್ನು ಇಡೀ ದೇಶಾದ್ಯಂತ ರಾಷ್ಟ್ರೀಯ ಎಂಜಿನಿಯರುಗಳ ದಿನವನ್ನಾಗಿ ಆಚರಿಸಲಾಗುತ್ತದೆ.

೧೮೬೧ ರ ಸೆಪ್ಟಂಬರ್ ೧೫ ರಂದು ಅವಿಭಜಿತ ಕೋಲಾರ ಜಿಲ್ಲೆಯ ಚಿಕ್ಕಬಳ್ಳಾಪುರ ತಾಲ್ಲೂಕಿನ ಮುದ್ದೇನಹಳ್ಳಿಯಲ್ಲಿ ಜನಿಸಿದರು.

೧೯೧೨ ರಿಂದ ೧೯೧೮ ರವರೆಗೆ ಮೈಸೂರು ಸಂಸ್ಥಾನದ ನಾಲ್ವಡಿ ಕೃಷ್ಣರಾಜ ಒಡೆಯರ ಆಡಳಿತಾವಧಿಯಲ್ಲಿ ೧೯ನೇ ದಿವಾನರಾಗಿ ಕೆಲಸ ಮಾಡಿದರು. ದಿವಾನರಾಗಿದ್ದ ಸಂದರ್ಭದಲ್ಲಿ ಕೃಷಿ, ಕೈಗಾರಿಕೆ ಮತ್ತು ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಗಮನಾರ್ಹ ಕೊಡುಗೆಗಳನ್ನು ನೀಡಿದರು. ಮಂಡ್ಯ, ಮೈಸೂರು ಜಿಲ್ಲೆಗಳ ರೈತರ ಜೀವನಾಡಿಯಾಗಿರುವ ಕಾವೇರಿ ನದಿಗೆ ಕೆ.ಆರ್.ಎಸ್ ಅಣೆಕಟ್ಟೆಯ ನಿರ್ಮಾಣಕ್ಕೆ ಕಾರಣರಾದರು.

ದೇಶದ ವಿವಿಧ ಯೋಜನೆಗಳ ಉಸ್ತುವಾರಿಯನ್ನು ಅವರು ನಿರ್ವಹಿಸಿದ್ದರು. ಅವರ ಕೊಡುಗೆಗಳನ್ನು ಗುರುತಿಸಿ ಭಾರತ ಸರ್ಕಾರ ೧೯೫೫ ರಲ್ಲಿ ದೇಶದ ಅತ್ಯುನ್ನತ ನಾಗರೀಕ ಪ್ರಶಸ್ತಿ ಭಾರತರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಿತು.

ಸರ್.ಎಂ.ವಿಶ್ವೇಶ್ವರಯ್ಯ ಗೌರವಾರ್ಥ ನಾಡಿನೆಲ್ಲೆಡೆ ನಾಳೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಸಲಾಗಿದೆ.

---

ರಾಜ್ಯಾದ್ಯಂತ ಇಂದು ಗೌರಿ-ಗಣೇಶ ಹಬ್ಬವನ್ನು ಸಡಗರದಿಂದ ಆಚರಿಸಲಾಗುತ್ತಿದೆ. ಗೌರಿ-ಗಣೇಶ ಹಬ್ಬದ ಆಚರಣೆಯನ್ನು ಶಾಂತಿಯುತ ಹಾಗೂ ಸುವ್ಯವಸ್ಥಿತವಾಗಿ ನಡೆಸುವ ಉದ್ದೇಶದಿಂದ ಕೊಪ್ಪಳ ಜಿಲ್ಲಾ ಪೊಲೀಸ್ ಇಲಾಖೆ ವ್ಯಾಪಕ ಭದ್ರತಾ ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಾಹಿಲ್ ಬಾಗ್ಲಾ ಅವರು ಹೇಳಿದರು.

ಗೌರಿ ಗಣೇಶ ಹಬ್ಬವನ್ನು ಇಂದು ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಅತ್ಯಂತ ಶ್ರದ್ಧಾಭಕ್ತಿ ಮತ್ತು ಸಡಗರ ಸಂಭ್ರಮಗಳಿಂದ ಆಚರಿಸಲಾಗುತ್ತಿದೆ ವಿವಿಧ ಗಣೇಶ ಮೂರ್ತಿ ಸಂಘಟನೆಗಳು ತಮ್ಮ ಬೀದಿ,ಬಡಾವಣೆಗಳಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪಿಸಿ ಪೂಜಿಸಿ ತೀರ್ಥ ಪ್ರಸಾದ ವಿತರಿಸುತ್ತಿವೆ. ನಗರದ ದೊಡ್ಡ ಗಣಪತಿ, ಬಲಮುರಿ ಗಣಪತಿ ದೇವಾಲಯ ಸೇರಿದಂತೆ ವಿವಿಧ ದೇವಾಲಯಗಳಲ್ಲಿ ಹಬ್ಬದ ಅಂಗವಾಗಿ ವಿಶೇಷ ಪೂಜೆ,ಅಲಂಕಾರ ಮತ್ತು ಧಾರ್ಮಿಕ ಕೈಂಕರ್ಯಗಳು ನಡೆದವು.

ಗೌರಿ ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲ್ಲೂಕಿನ ಪುರಾಣ ಪ್ರಸಿದ್ಧ ಇಡಗುಂಜಿ ವಿನಾಯಕ ದೇವಸ್ಥಾನದಲ್ಲಿ ಭಕ್ತರ ದಟ್ಟಣೆ ಕಂಡುಬಂದಿತು. ದ್ವಿಭುಜ ಬಾಲ ಗಣಪನ ದರ್ಶನ ಪಡೆಯಲು ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಭಕ್ತರು ಆಗಮಿಸಿದ್ದು, ಇಡಗುಂಜಿ ಕ್ಷೇತ್ರದಲ್ಲಿ ಹಬ್ಬದ ಸಂಭ್ರಮ ಕಳೆಗಟ್ಟಿತ್ತು. ಬೆಳಗ್ಗೆಯಿಂದಲೇ ದೇವಸ್ಥಾನಕ್ಕೆ ಭಕ್ತರ ಆಗಮನ ಹೆಚ್ಚಾಗಿದ್ದು, ದೇವರ ದರ್ಶನಕ್ಕಾಗಿ ಭಕ್ತರು ಸರದಿ ಸಾಲಿನಲ್ಲಿ ನಿಂತು ವಿನಾಯಕನಿಗೆ ವಿಶೇಷ ಪೂಜೆ ಹಾಗೂ ಫಲಾವಳಿ ಸೇವೆ ಸಲ್ಲಿಸಿದರು. ತಮ್ಮ ತೋಟಗಳಲ್ಲಿ ಬೆಳೆದ ಅಡಕೆ, ತೆಂಗಿನಕಾಯಿ, ವಿವಿಧ ತರಕಾರಿಗಳು ಸೇರಿದಂತೆ ಸಿಂಗಾರ ಸಾಮಗ್ರಿಗಳನ್ನು ಕಟ್ಟಿ ಫಲಾವಳಿ

ಸಿದ್ಧಪಡಿಸಿ, ಗಣಪತಿಗೆ ಅರ್ಪಿಸಿದರು. ಇಡಗುಂಜಿಯ ವಿನಾಯಕ ವಿಗ್ರಹವು ದ್ವಿಭುಜ ಬಾಲ ಗಣಪನ ರೂಪದಲ್ಲಿದ್ದು, ಎರಡೂ ದಂತಗಳನ್ನು ಹೊಂದಿರುವುದು ಕ್ಷೇತ್ರದ ಪ್ರಮುಖ ವಿಶೇಷತೆಯಾಗಿದೆ.

---

ಗೌರಿ ಗಣೇಶ ಮೂರ್ತಿಗಳ ವಿಸರ್ಜನೆಯನ್ನು ಪರಿಸರ ಸ್ನೇಹಿಯನ್ನಾಗಿಸಲು ರಾಜ್ಯ ಸರ್ಕಾರ ವ್ಯಾಪಕ ವ್ಯವಸ್ಥೆ ಮಾಡಿದೆ. ಜಲಮೂಲಗಳಿಗೆ ಹಾನಿಯಾಗದಂತೆ ರಾಜ್ಯದ ಪ್ರಮುಖ ನಗರಗಳಲ್ಲಿ ಕೃತಕ ನೀರಿನ ಹೊಂಡ, ಟ್ಯಾಂಕ್ ಸೇವೆಯನ್ನು ಕಲ್ಪಿಸಲಾಗಿದೆ.

ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿರುವ ಐದು ನಗರ ಪಾಲಿಕೆಗಳಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಹಾಗೂ ವಿಸರ್ಜನೆಗೆ ಅನುಮತಿ ನೀಡಲು ೧೨ ಏಕಗವಾಕ್ಷಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಮೂರ್ತಿಗಳ ವಿಸರ್ಜನೆಗೆ ಅನುಕೂಲವಾಗುವಂತೆ ಒಟ್ಟು ೪೨ ಕೆರೆ ಅಂಗಳದಲ್ಲಿ ತಾತ್ಕಾಲಿಕ ಕಲ್ಯಾಣಿಗಳು ಹಾಗೂ ವಾರ್ಡ್‌ವಾರು ೬೫೯ ಮೊಬೈಲ್ ಟ್ಯಾಂಕ್‌ಗಳ ವ್ಯವಸ್ಥೆ ಮಾಡಲಾಗಿದೆ.

ಮೂರ್ತಿಗಳ ಪ್ರತಿಷ್ಠಾಪನೆ, ವಿಸರ್ಜನೆಗೆ ಸಂಬಂಧಿಸಿದಂತೆ ಜನರಿಗೆ ಅಗತ್ಯ ಮಾರ್ಗದರ್ಶನ ನೀಡಲು, ವ್ಯವಸ್ಥೆಗಳ ಮೇಲ್ವಿಚಾರಣೆ ನಡೆಸಲು ನೋಡಲ್ ಅಧಿಕಾರಿಗಳನ್ನು ಸಹ ನಿಯೋಜಿಸಲಾಗಿದೆ ಎಂದು ಪ್ರಾಧಿಕಾರ ತಿಳಿಸಿದೆ. ಏಕಗವಾಕ್ಷಿ ಕೇಂದ್ರಗಳು ಹಾಗೂ ಸಂಬಂಧಿತ ವ್ಯವಸ್ಥೆಗಳ ಸಂಪೂರ್ಣ ಮಾಹಿತಿಯನ್ನು https://apps.bbmp.gov.in/ganesha2026 ನಲ್ಲಿ ಪಡೆಯಬಹುದಾಗಿದೆ.

ವಿಜಯಪುರ ಗಣೇಶೋತ್ಸವದ ಹಿನ್ನೆಲೆಯಲ್ಲಿ ನಗರದಲ್ಲಿ ಸಾರ್ವಜನಿಕವಾಗಿ ಪ್ರತಿಷ್ಠಾಪಿಸಲಾಗಿರುವ ಹಾಗೂ ಮನೆಗಳಲ್ಲಿ ಪೂಜಿಸಲಾಗುವ ಗಣೇಶ ಮೂರ್ತಿಗಳ ವಿಸರ್ಜನೆ ಸುಗಮವಾಗಿ, ಸುರಕ್ಷಿತವಾಗಿ ನಡೆಯುವಂತೆ ವಿಜಯಪುರ ಮಹಾನಗರ ಪಾಲಿಕೆಯು ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡಿದೆ.

ಈ ಬಗ್ಗೆ ಪ್ರಕಟಣೆ ನೀಡಿರುವ ಪಾಲಿಕೆ, ಸಾರ್ವಜನಿಕರ ಸುರಕ್ಷತೆ, ನೈರ್ಮಲ್ಯ ಹಾಗೂ ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಿ ನಗರದ ವಿವಿಧೆಡೆ ವಿಸರ್ಜನಾ ಹೊಂಡಗಳು, ಮೊಬೈಲ್ ಟ್ಯಾಂಕ್‌ಗಳು ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದ್ದು, ನಿಗದಿಪಡಿಸಿರುವ ವಿಸರ್ಜನಾ ಸ್ಥಳಗಳನ್ನೇ ಬಳಸುವಂತೆ ಮನವಿ ಮಾಡಲಾಗಿದೆ. ಪ್ಲಾಸ್ಟರ್ ಆಫ್ ಪ್ಯಾರಿಸ್ ಮೂರ್ತಿಗಳು, ಪ್ಲಾಸ್ಟಿಕ್ ಅಲಂಕಾರಿಕ ಸಾಮಗ್ರಿಗಳು ಸೇರಿದಂತೆ ಪರಿಸರಕ್ಕೆ ಹಾನಿಕಾರಕ ವಸ್ತುಗಳನ್ನು ಜಲಮೂಲಗಳಿಗೆ ಹಾಕದಂತೆ ಪಾಲಿಕೆ ಸೂಚಿಸಿದೆ.

---

ರಾಯಚೂರು ಜಿಲ್ಲೆಯಲ್ಲಿ ೨ ಸಾವಿರದ ೫೬೦ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗಿದ್ದು, ಗಣೇಶ ಮೂರ್ತಿ ವಿಸರ್ಜನೆ ವಿಚಾರದಲ್ಲಿ ಸಮಯ ಪಾಲನೆ ಮಾಡಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರುಣಾಂಶು ಗಿರಿ ಮನವಿ ಮಾಡಿದ್ದಾರೆ.

ರಾತ್ರಿ ೧೦.೩೦ರೊಳಗೆ ಮೂರ್ತಿ ವಿಸರ್ಜನೆ ಮಾಡಲು ಗಣೇಶ ಮಂಡಳಿಗಳು ಸಹಕರಿಸಬೇಕು ಎಂದರು ಕೋರಿದ್ದಾರೆ.

---

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ರಾಜ್ಯಾದ್ಯಂತ ನಾಳೆ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಆಚರಿಸಲಾಗುತ್ತದೆ.

ಬೆಂಗಳೂರು ವಿಧಾನಸೌಧದಲ್ಲಿ ಪ್ರಧಾನ ಕಾರ್ಯಕ್ರಮ ನಡೆಯಲಿದ್ದು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವ ರಿಜ್ವಾನ್ ಅರ್ಷದ್ ಅಧ್ಯಕ್ಷತೆ ವಹಿಸಲಿದ್ದಾರೆ. ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್, ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್, ವಿಧಾನಸಭೆ ಸಭಾಧ್ಯಕ್ಷ ಜಿ.ಎಸ್. ಪಾಟೀಲ್ ಹಾಗೂ ಸಮಾಜ ಕಲ್ಯಾಣ ಸಚಿವ ಕೆ.ಎಚ್.ಮುನಿಯಪ್ಪ ಉಪಸ್ಥಿತರಿರುವರು.

ಕೋಲಾರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ನಾಳೆ ಬೆಳಿಗ್ಗೆ ಹಮ್ಮಿಕೊಳ್ಳಲಾಗಿರುವ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ ಚಾಲನೆ ನೀಡಲಿದ್ದಾರೆ.

__________ ಮುಕ್ತಾಯ __________